**ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯದಲ್ಲಿ, ತರೀಕೆರೆ.**

ಸಿಸಿ ನಂಬರ್**39 /2022**

| | | |
|---|---|---|
| ಸಾಕ್ಷಿಯ ಹೆಸರು | : ಬಾಬು | ಸಿ.ಡಬ್ಲ್ಯು 11 |
| ತಂದೆಯ ಹೆಸರು | : ಸಿದ್ದಪ್ಪ | ಪಿ.ಡಬ್ಲ್ಯು 6 |
| ವಯಸ್ಸು | : 48 ವರ್ಷ | |
| ಉದ್ಯೋಗ | : ಮುಖ್ಯಪೇದೆ | |
| ವಾಸ ಸ್ಥಳ | : ತರೀಕೆರೆ | |

ದಿನಾಂಕಃ**17-12-2024** ರಂದು ಸಾಕ್ಷಿಗೆ ಪ್ರಮಾಣ ವಚನ ಬೋಧಿಸಲಾಯಿತು

ಮುಖ್ಯ ವಿಚಾರಣೆಃ ಮಾನ್ಯ ಸ.ಸ.ಅ. ರವರಿಂದಃ-

ನಾನು 2019 ನೇ ಸಾಲಿನಿಂದ ಇಲ್ಲಿಯವರೆಗೆ ತರೀಕೆರೆಯಲ್ಲಿ ಮುಖ್ಯ ಪೇದೆ ಎಂದು ಕೆಲಸ ಮಾಡುತ್ತಿದ್ದೇನೆ.

ಈ ಪ್ರಕರಣದಲ್ಲಿ ದಿಃ 24-06-2021 ರಂದು ಮದ್ಯಾಹ್ನ 2-30 ರ ಸಮಯದಲ್ಲಿ ಚಾಸಾ-1 ರವರು ನೀಡಿದ ಲಿಖಿತ ದೂರನ್ನು ಪಡೆದುಕೊಂಡು ಗುನ್ನೆ ದಾಖಲಿಸಿ ಪ್ರ.ವ.ವರದಿಯನ್ನು ನ್ಯಾಯಾಲಯಕ್ಕೆ ಕಳುಹಿಸಿಕೊಟ್ಟಿದ್ದೇನೆ. ದಿಃ25-06-2021 ರಂದು ಅಪಘಾತ ಸ್ಥಳಕ್ಕೆ ಭೇಟಿ ನೀಡಿ ಚಾಸಾ-5 ರವರು ತೋರಿಸಿದ ಸ್ಥಳದಲ್ಲಿ ಚಾಸಾ-3 ಮತ್ತು 4 ರವರ ಸಮಕ್ಷಮ ಗುನ್ನಾ ಸ್ಥಳದ ಪಂಚನಾಮೆಯನ್ನು ಜರುಗಿಸಿದ್ದೇನೆ ಮತ್ತು ಭಾವಚಿತ್ರ ತೆಗಸಿದ್ದೇನೆ. ಅದೇ ದಿನ ಮೇಲ್ಕಂಡ ಸಾಕ್ಷಿದಾರರ ಸಮಕ್ಷಮ ಬೆಳಗ್ಗೆ 11-30 ರಿಂದ 12-30 ರ ಮದ್ಯದಲ್ಲಿ ಜಪ್ತಿ ಪಂಚನಾಮೆಯನ್ನು ಕೂಡ ಜರುಗಿಸಿದ್ದೇನೆ. ಸಾಕ್ಷಿದಾರರಾದ ಚಾಸಾ-5 ಮತ್ತು 6 ರವರ ಹೇಳಿಕೆಗಳನ್ನು ಪಡೆದುಕೊಂಡಿದ್ದೇನೆ. ದಿಃ20-07-2021 ರಂದು ಚಾಸಾ-7 ರವರಿಗೆ ವಾಹನ ತಪಾಸಣೆ ಮಾಡಿಕೊಡುವಂತೆ ಪತ್ರ ಬರೆದಿದ್ದೇನೆ. ದಿಃ01-09-2021 ರಂದು ಆರೋಪಿಗೆ ಐ.ಎಂ.ವಿ ನೋಟೀಸು ನೀಡಿ ಉತ್ತರವನ್ನು ಪಡೆದುಕೊಂಡಿದ್ದೇನೆ. ಅದೇ ದಿನ ದಸ್ತಗಿರಿ ನಿಯಮಗಳನ್ನು ಅನುಸರಿಸಿ ಜಾಮೀನಿನ ಮೇಲೆ ಬಿಡುಗಡೆ ಮಾಡಿದ್ದೇನೆ. ಸೂಕ್ತ ದಾಖಲೆಗಳನ್ನು ಪಡೆದುಕೊಂಡು ವಾಹನವನ್ನು ಆತನ ಮದ್ಯಂತರ ವಶಕ್ಕೆ ಬಿಟ್ಟುಕೊಟ್ಟಿದ್ದೇನೆ. ದಿಃ01-09-2021 ರಂದು ಚಾಸಾ-7 ರವರಿಂದ ಐ.ಎಂ.ವಿ ವರದಿಯನ್ನು ದಿನಾಂಕ 12-12-2021 ರಂದು ಚಾಸಾ-2 ರವರ ಗಾಯದ ಪ್ರಮಾಣ ಪತ್ರವನ್ನು ಚಾಸಾ-8 ರವರಿಂದ ಪಡೆದುಕೊಂಡು ಕಡತಕ್ಕೆ ಅಳವಡಿಸಿಕೊಂಡಿರುತ್ತೇನೆ. ಅದುವರೆಗಿನ ತನಿಖೆಯಿಂದ ಆರೋಪ ಸಾಬೀತು ಆದ ಕಾರಣ ಅಂತಿಮ ವರದಿ ಸಲ್ಲಿಸಿದ್ದೇನೆ. ನಿ.ಪಿ-1 ರಿಂದ 4 ರ ಮೇಲಿನ ಸಹಿಗಳನ್ನು ನಿ.ಪಿ-1(ಬಿ), 2(ಬಿ), 3(ಸಿ) ಮತ್ತು 4(ಸಿ) ಎಂದು ಗುರುತಿಸಿಕೊಳ್ಳುತ್ತೇನೆ. ಪ್ರ.ವ.ವರದಿಯನ್ನು ನಿ.ಪಿ-6 ಎಂದು ಗುರುತಿಸಿಕೊಳ್ಳುತ್ತೇನೆ. ಎರಡು ಇಂಡೆಮ್ನಿಟಿ ಬಾಂಡುಗಳನ್ನು ನಿ.ಪಿ-7 ಮತ್ತು 8, ಐ.ಎಂ.ನೋಟೀಸು ಮತ್ತು ಉತ್ತರವನ್ನು ಕ್ರಮವಾಗಿ ನಿ.ಪಿ-9 ಮತ್ತು 10 ಎಂದು, ಐ.ಎಂ.ವಿ ವರದಿಯನ್ನು ನಿ.ಪಿ-11 ಎಂದು, ಸಹಿಗಳನ್ನು ಕ್ರಮವಾಗಿ ನಿ.ಪಿ-7(ಎ) ರಿಂದ 10(ಎ) ಎಂದು

ಗುರುತಿಸಿಕೊಳ್ಳುತ್ತೇನೆ. ಆರೋಪಿಯನ್ನು ನೋಡಿ ಗುರುತಿಸುತ್ತೇನೆ. ಚಾಸಾ-5 ರವರು ನನ್ನ ಮುಂದೆ ನಿ.ಪಿ-5 ರಂತೆ ಹೇಳಿಕೆಯನ್ನು ನೀಡಿರುತ್ತಾರೆ.

<u>ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ</u>

ಚಾಸಾ-1 ರವರು ನೀಡಿದ ಸುಳ್ಳು ದೂರಿನ ಅನ್ವಯ ಸುಳ್ಳು ಪ್ರಕರಣ ದಾಖಲಿಸಿದ್ದೇನೆ ಎಂದರೆ ಸರಿಯಲ್ಲ. ನಾನು ಯಾವುದೇ ಸ್ಥಳ ತನಿಖೆ ಅಥವಾ ಜಪ್ತಿ ಪಂಚನಾಮೆಯನ್ನು ಮಾಡಿಲ್ಲ ಎಂದರೆ ಸರಿಯಲ್ಲ. ಸಾಕ್ಷಿದಾರರು ನನ್ನ ಮುಂದೆ ಯಾವುದೇ ಹೇಳಿಕೆಗಳನ್ನು ಕೊಟ್ಟಿಲ್ಲ ಎಂದರೆ ಸರಿಯಲ್ಲ. ಹೇಳಿಕೆಗಳನ್ನು ಮತ್ತು ನಿ.ಪಿ-7 ರಿಂದ 11 ದಾಖಲೆಗಳನ್ನು ಪ್ರಕರಣಕ್ಕೆ ಅನುಕೂಲವಾಗುವ ರೀತಿ ಬರೆದಿದ್ದೇನೆ ಎಂದರೆ ಸರಿಯಲ್ಲ. ಆರೋಪಿಯ ವಾಹನಕ್ಕೆ ಯಾವುದೇ ಜಖಂ ಆಗಿರುವುದಿಲ್ಲ ಎಂದರೆ ಸರಿಯಲ್ಲ. ಮೇಲ್ನೋಟಕ್ಕೆ ಆರೋಪ ಸಾಬೀತು ಆಗದೇ ಇದ್ದರೂ ಕೂಡ ಸುಳ್ಳು ಅಂತಿಮ ವರದಿ ಸಲ್ಲಿಸಿದ್ದೇನೆ ಎಂದರೆ ಸರಿಯಲ್ಲ.

<u>ಮರುವಿಚಾರಣೆ :</u> ಇಲ್ಲಃ

**(ತೆರೆದ ನ್ಯಾಯಾಲಯದಲ್ಲಿ ಸಾಕ್ಷಿಯ ಹೇಳಿಕೆಯನ್ನು ನನ್ನ ಉಕ್ತಲೇಖನಕ್ಕೆ ಬೆರಳಚ್ಚು ಮಾಡಲಾಯಿತು.)**

ಓ ಹೇ ಕೇ ಸ ಇ ಎ ಒ

ಸಹಿ/-
ಹಿರಿಯ ಸಿವಿಲ್ ನ್ಯಾಯಾಧೀಶರು ಮತ್ತು ಪ್ರಧಾನ
ಪ್ರ.ದ.ನ್ಯಾ.ದಂ., ರವರ ನ್ಯಾಯಾಲಯ, ತರೀಕೆರೆ.